# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ | KANNADA POST | ಇದು ಸುದ್ದಿ ವಿಳಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 257 | Pages. 2 | Date: 25-09-2026, FRIDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 257 - ಪುಟಗಳು : 2 | 25-09-2026 ಶುಕ್ರವಾರ | Ph: 8762954248 | ದರ : ₹1


# ಹೊಸ ಕಾರಾಗೃಹ: ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಕೆ

## ಮಂಜೇಶ್ ಕೊಲೆ ಆರೋಪಿಗಳು ಶೀಘ್ರ ಸ್ಥಳಾಂತರ | ಡಿಜಿಪಿ ಅಲೋಕ್ ಕುಮಾರ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹಾಸನ ಕಾರಾಗೃಹದಲ್ಲಿ 250 ಕೈದಿಗಳು ಮಾತ್ರ ಇರಲು ಅವಕಾಶವಿದ್ದು 334 ಕೈದಿಗಳಿದ್ದಾರೆ. ಹೊಸ ಕಟ್ಟಡಕ್ಕಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಕಾರಾಗೃಹ ಮತ್ತು ಸುಧಾರಣಾ ಸೇವೆಗಳ ಪೊಲೀಸ್ ಮಹಾನಿರ್ದೇಶಕ (ಡಿಜಿಪಿ) ಅಲೋಕ್ ಕುಮಾರ್ ಹೇಳಿದರು.

ಗುರುವಾರ ನಗರದ ಜಿಲ್ಲಾ ಕಾರಾಗೃಹಕ್ಕೆ ಭೇಟಿ ನೀಡಿ ವ್ಯವಸ್ಥೆ ಪರಿಶೀಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದೇ ಮೊದಲ ಬಾರಿಗೆ ಹಾಸನ ಕಾರಾಗೃಹಕ್ಕೆ ಭೇಟಿ ನೀಡಿದ್ದೇನೆ. ಜೈಲಿನಲ್ಲಿ ಸ್ಥಳಾವಕಾಶ ಕಡಿಮೆ ಇದೆ. ಕೈದಿಗಳು ಜೈಲಿನ ನಿಯಮದಂತೆ ಶಿಸ್ತು ಕಾಪಾಡಬೇಕು. ಆಹಾರ ಪರಿಶೀಲನೆ ಮಾಡಿದ್ದೇವೆ, ಗುಣಮಟ್ಟ ಕಾಪಾಡಿಕೊಳ್ಳಲಾಗಿದೆ. ಮೊದಲೆಲ್ಲಾ ಜೈಲಿನೊಳಗೆ ವಸ್ತುಗಳನ್ನು ಎಸೆಯುವ ಪರಿಪಾಠ ಇತ್ತು. ಅಂತಹ ಸೂಕ್ಷ್ಮ ಸ್ಥಳಗಳನ್ನೆಲ್ಲಾ ಪರಿಶೀಲಿಸಿದ್ದೇನೆ. ಅಂತಹ ಸಮಸ್ಯೆ



ಕಂಡು ಬಂದಿಲ್ಲ ಎಂದರು.

ಕೆಲವು ಗ್ಯಾಂಗ್‌ಗಳು, ರೌಡಿ ಶೀಟರ್ ಮಂಜೇಶ್ ಕೊಲೆ ಪ್ರಕರಣದ ಹತ್ತು ಆರೋಪಿಗಳಿದ್ದಾರೆ. ಅವರನ್ನು ಮೈಸೂರಿಗೆ ಜೈಲಿಗೆ ಕಳುಹಿಸುತ್ತಿದ್ದೇವೆ. ಜೈಲಿನಲ್ಲಿ ಗ್ಯಾಂಗ್ ವಾರ್ ನಡೆಯುತ್ತಿರುವ ಕುರಿತು ಮಾಹಿತಿ ಇದೆ. ಕೆಲವರು ಬೇಕಂತಲೇ ಗಲಾಟೆ ಮಾಡಿದ್ದಾರೆ. ಗಲಾಟೆಗೆ ಪ್ರಚೋದನೆ ನೀಡುವವರನ್ನು ಶೀಘ್ರ ಸ್ಥಳಾಂತರ ಮಾಡಲಾಗುತ್ತದೆ ಎಂದರು.

ಪರಿಶೀಲನೆ ವೇಳೆ ಮೊಬೈಲ್ ಸೇರಿ ಯಾವುದೇ ವಸ್ತುಗಳು ಸಿಕ್ಕಿಲ್ಲ. ಈ ವರ್ಷ ಇಲ್ಲಿ ಯಾವುದೇ ಮೊಬೈಲ್ ಪತ್ತೆಯಾಗಿಲ್ಲ. ಬೇರೆ ಜೈಲುಗಳಲ್ಲಿ ಮೊಬೈಲ್ ಸೀಜ್ ಮಾಡಿದ್ದೇವೆ. ಹಾಸನದಲ್ಲಿ ಆ ರೀತಿಯ ಸಮಸ್ಯೆಗಳು ಇಲ್ಲ. ಪರಪ್ಪನ ಅಗ್ರಹಾರ ಜೈಲಿನಲ್ಲೂ ಮೊಬೈಲ್ ಬಳಕೆ ಕಡಿಮೆ ಆಗಿದೆ.

ಹಳೆಯ ಮೊಬೈಲ್‌ಗಳನ್ನು ಖೈದಿಗಳು ಬಳಸುತ್ತಿದ್ದರು. ಈಗ ಅವರಿಗೆ ಜೈಲು ಕರೆ ವ್ಯವಸ್ಥೆ ಮೂಲಕ ಮಾತನಾಡಲು ಅವಕಾಶ ಕೊಟ್ಟಿದ್ದೇವೆ. ಆದರೆ ಫೋನ್ ಮೂಲಕ ಅಕ್ರಮ ಚಟುವಟಿಕೆ ನಡೆಸಬಾರದು. ಒಟ್ಟು 48 ಜೈಲು ಕರೆ ವ್ಯವಸ್ಥೆ ಮಾಡಲಾಗಿದೆ ಎಂದು ಹೇಳಿದರು.

### ಕೈದಿಗಳೊಂದಿಗೆ ಡಿಜಿಪಿ ಸಮಾಲೋಚನೆ

ಪ್ರತಿ ಬ್ಯಾರಕ್‌ಗೂ ಭೇಟಿ ನೀಡಿದ ಅಲೋಕ್ ಕುಮಾರ್ ಅವರು ಖೈದಿಗಳೊಂದಿಗೆ ಸಮಾಲೋಚನೆ ನಡೆಸಿದರು. ಕೈದಿಗಳಿಗಾಗಿ ತಯಾರಿಸಿದ್ದ ಅಡುಗೆ ಸವಿದು ಗುಣಮಟ್ಟ ಪರಿಶೀಲಿಸಿದರು. ಕಟಿಂಗ್ ಮಾಡಿಸಿಕೊಳ್ಳದೆ ಇದ್ದ ಖೈದಿಗಳಿಗೆ ಖಡಕ್ ಎಚ್ಚರಿಕೆಯನ್ನೂ ನೀಡಿದರೆಂದು ತಿಳಿದುಬಂದಿದೆ.

ಸುಮಾರು ಒಂದೂವರೆ ಗಂಟೆಗಳ ಕಾಲ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭನ್ವಿತಾ, ಜೈಲು ಅಧೀಕ್ಷಕ ಪ್ರಸನ್ನ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶ್ರೀನಿಧಿ, ಡಿವೈಎಸ್‌ಪಿ ಗಂಗಾಧರಪ್ಪ ಅವರೊಂದಿಗೆ ಪರಿಶೀಲಿಸಿದರು.

# ಮಾಡಾಳು ಗ್ರಾಮದಲ್ಲಿ ಸ್ವರ್ಣ ಗೌರಮ್ಮಗೆ ವಿಶೇಷ ಪೂಜೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಮಾಡಾಳು: ಭಕ್ತಿ ಮತ್ತು ಶಕ್ತಿಯ ಮಹಾಸಂಗಮವೇ ಮಾಡಾಳು ಮೂಲಸ್ಥಾನ ಶ್ರೀ ಸ್ವರ್ಣ ಗೌರಮ್ಮ ದೇವಿ ನೆಲೆಸಿರುವ ಸನ್ನಿಧಿ ಎಂದು ಹಾರನಹಳ್ಳಿ ಸುಕ್ಷೇತ್ರ ಕೋಡಿಮಠದ ಜಗದ್ಗುರು ಡಾ. ಶ್ರೀ ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ತಿಳಿಸಿದರು.

ದೇವಾಲಯದ ಗರ್ಭಗುಡಿಯಲ್ಲಿ ಪ್ರತಿಷ್ಠಾಪಿಸಿರುವ ಅಮ್ಮನವರಿಗೆ ಸಂಪ್ರದಾಯದಂತೆ 10ನೇ ದಿನ ದೊಡ್ಡ ಮಂಗಳಾರತಿ (ಮಹಾ ಮಂಗಳಾರತಿ) ಸೇವೆಯಲ್ಲಿ ಆಶೀರ್ವಚನ ನೀಡಿದ ಅವರು, ಮಾಡಾಳು-ಕೋಡಿಮಠಕ್ಕೆ ಅವಿನಾಭಾವ ಸಂಬಂಧವಿದೆ. ಕೋಡಿಮಠದಲ್ಲಿ ಯೋಗ ಸಮಾಧಿಯಲ್ಲಿರುವ ಮಹಾ ತಪಸ್ವಿ ಶಿವಲಿಂಗಸ್ವಾಮಿ ಒಂದು ಕೋಟಿ ಜಪ ಮಾಡಿ ಸಿದ್ಧಿಸಿದ ಬಂಗಾರದ ಮೂಗುತಿಯನ್ನು ಗೌರಿ ಹಬ್ಬದಂದು ಗೌರಮ್ಮ ದೇವಿಗೆ ಧಾರಣೆ ಮಾಡಿದ ನಂತರ ದೇವಿ ಸಾಕ್ಷಾತ್ ಪಾರ್ವತಿ ದೇವಿಯಾಗಿ ಕಂಗೊಳಿಸುತ್ತಾಳೆಂದರು.

ಅಮ್ಮನವರು ತನ್ನ ನಂಬಿ ಬರುವ ಭಕ್ತರ ಇಷ್ಟಾರ್ಥಗಳನ್ನು ಈಡೇರಿಸುತ್ತ ಸಂಕಷ್ಟಗಳನ್ನು ಪರಿಹರಿಸುತ್ತಾ ಬಂದಿರುವುದರಿಂದ ಭಕ್ತರ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿದೆ. ಅಲ್ಲದೆ ರಾಜ್ಯದಲ್ಲಿರುವ ಶಕ್ತಿಪೀಠಗಳಂತೆ ಇದು ಮತ್ತೊಂದು ಶಕ್ತಿ ಪೀಠವಾಗಿ ಬೆಳೆಯಲಿದೆ ಎಂದು ಸ್ವಾಮೀಜಿ ಹೇಳಿದರು.

ಕೋಡಿಮಠದ ಉತ್ತರಾಧಿಕಾರಿ ಚೇತನ್ ಮರಿದೇವರು ಮೂಲ ಸನ್ನಿಧಿಯಲ್ಲಿ ಪೂಜೆ ಸಲ್ಲಿಸಿ ಭಕ್ತರು ಫಲಾಹಾರದ ಕುಕ್ಕೆಗಳನ್ನು ಹೊತ್ತು ಮಂಗಲ ಕರಡೇ ವಾದ್ಯದೊಂದಿಗೆ



ನೂರಾರು ಭಕ್ತರ ಒಡಗೂಡಿ ಉತ್ಸವದಲ್ಲಿ ಗೌರಮ್ಮ ದೇವಾಲಯಕ್ಕೆ ತೆರಳಿದರು. 9 ಗಂಟೆಗೆ ಸರಿಯಾಗಿ ಶ್ರೀಗಳ ಸಾನಿಧ್ಯದಲ್ಲಿ ದೇವಾಲಯದ ಪದ್ಧತಿಯಂತೆ ಧಾರ್ಮಿಕ ವಿಧಿ ವಿಧಾನದೊಂದಿಗೆ ಕರ್ಪೂರದಾರತಿ ಬೆಳಗಲಾಯಿತು. ಗೊಲ್ಲಳ್ಳಿ ವಿದ್ಯಾಶಂಕರ ದೇಸಿ ಕೇಂದ್ರ ಸ್ವಾಮೀಜಿ, ಐನಳ್ಳಿ ಪ್ರಶಾಂತ್ ದೇವರು, ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ನಿವೃತ್ತ ಡಿಐಜಿ ಜ್ಯೋತಿ ಪ್ರಕಾಶ್ ಮಿರ್ಜಿ, ಉದ್ಯಮಿ ಗಣೇಶ್ ಮತ್ತಿತರರಿದ್ದರು.

# ಸಕಲೇಶಪುರದಲ್ಲಿ ರೆಡ್ ಕ್ರಾಸ್‌ನಿಂದ ರಕ್ತದಾನ ಶಿಬಿರ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಭಾರತೀಯ ರೆಡ್ ಕ್ರಾಸ್, ಜೆಎಸ್ಎಸ್ ಶಿಕ್ಷಣ ಮಹಾವಿದ್ಯಾಲಯ, ಲಯನ್ಸ್ ಕ್ಲಬ್ ಹಾಗೂ ಯುವ ರೆಡ್ ಕ್ರಾಸ್ ಘಟಕದಿಂದ ಗುರುವಾರ ಜೆಎಸ್ಎಸ್ ಶಿಕ್ಷಣ ಸಂಸ್ಥೆಯಲ್ಲಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿತ್ತು.

ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಕಾರ್ಯದರ್ಶಿ ಶಬ್ಬೀರ್ ಅಹ್ಮದ್ ಮಾತನಾಡಿ, ಭಾರತದಲ್ಲಿ 1920ರಲ್ಲಿ ರೆಡ್ ಕ್ರಾಸ್ ಅಸ್ತಿತ್ವಕ್ಕೆ ಬಂದಿದ್ದು, ಸಂಸ್ಥಾಪಕ ಜೀನ್ ಹೆನ್ರಿ ಡ್ಯೂನಾಂಟ್ ಅವರ ಮಾನವೀಯ ಸೇವಾ ಆಶಯದಂತೆ ಆರೋಗ್ಯ, ಶಿಕ್ಷಣ, ರಕ್ತದಾನ ಹಾಗೂ ಸಮಾಜ ಸೇವೆಯ ಕುರಿತು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ ಎಂದರು.

ಜಿಲ್ಲೆಯಲ್ಲಿ ರೆಡ್ ಕ್ರಾಸ್ ಸಂಸ್ಥೆಯು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದ್ದು, ಕಳೆದ ಎರಡು ವರ್ಷಗಳಿಂದ ಪ್ರತಿ ಮಂಗಳವಾರ ಮತ್ತು ಶುಕ್ರವಾರ ಉಚಿತ ರೆಡ್ ಕ್ರಾಸ್ ಕ್ಲಿನಿಕ್ ಅನ್ನು ವ್ಯವಸ್ಥಿತವಾಗಿ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ರೆಡ್ ಕ್ರಾಸ್ ಸಂಸ್ಥೆಯ ನಿರ್ದೇಶಕ ಬಿ.ಆರ್. ಉದಯ್ ಕುಮಾರ್ ಮಾತನಾಡಿ, ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜೊತೆಗೆ ಶಿಸ್ತು ಹಾಗೂ ಸೇವಾ ಮನೋಭಾವವನ್ನು ಬೆಳೆಸಿಕೊಂಡು ಸದೃಢ ಸಮಾಜ ನಿರ್ಮಾಣಕ್ಕೆ ಕೊಡುಗೆ ನೀಡಬೇಕು ಎಂದು ಕರೆ ನೀಡಿದರು.

ರೆಡ್ ಕ್ರಾಸ್ ಸಂಸ್ಥೆಯ ನಿರ್ದೇಶಕಿ ಕೆ.ಟಿ. ಜಯಶ್ರೀ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ರಸ್ತೆ ಅಪಘಾತಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ರಕ್ತದ ಅವಶ್ಯಕತೆಯೂ ಹೆಚ್ಚಾಗಿದೆ. ಆದ್ದರಿಂದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಸ್ವಯಂ ಪ್ರೇರಿತರಾಗಿ ರಕ್ತದಾನಕ್ಕೆ ಮುಂದಾಗಬೇಕು ಎಂದು ಹೇಳಿದರು.

ಈ ಶಿಬಿರದಲ್ಲಿ ಒಟ್ಟು 50 ವಿದ್ಯಾರ್ಥಿ-ವಿದ್ಯಾರ್ಥಿನಿಯರು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿದರು. ರಕ್ತದಾನ ಮಾಡಿದ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ಸಲುವಾಗಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆಯ ವತಿಯಿಂದ ಕೀಚೈನ್‌ಗಳನ್ನು ಹಾಗೂ ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತ ಮಾಸ್ಕ್ ವಿತರಿಸಲಾಯಿತು. ಅಧ್ಯಕ್ಷತೆಯನ್ನು ಪ್ರಾಂಶುಪಾಲ ಡಾ. ನಂಜುಡಪ್ಪ ವಹಿಸಿದ್ದರು.

# ಹಾಸನಾಂಬ ಜಾತ್ರೆಗೆ ಜಿಲ್ಲಾಡಳಿತದಿಂದ ಸಕಲ ಸಿದ್ಧತೆ

## ಅ.29 ರಿಂದ ನ. 11ರ ವರೆಗೆ ದರ್ಶನ | ಭಕ್ತರ ಅನುಕೂಲಕ್ಕಾಗಿ ಹಲವು ಕ್ರಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಶಕ್ತಿ ದೇವತೆ ಹಾಸನಾಂಬ ಜಾತ್ರಾ ಮಹೋತ್ಸವ ಅ. 29 ರಿಂದ ನ. 11ರ ವರೆಗೆ ನಡೆಯಲಿದ್ದು ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಹೇಳಿದರು.

ಹಾಸನಾಂಬ ಜಾತ್ರಾ ಮಹೋತ್ಸವ ಸಿದ್ಧತೆ ಕುರಿತು ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿ, ಮೊದಲ ಹಾಗೂ ಕೊನೆಯ ದಿನ ಸಾರ್ವಜನಿಕರಿಗೆ ದರ್ಶನಕ್ಕೆ ಅವಕಾಶ ಇರುವುದಿಲ್ಲ. ಉಳಿದ 12 ದಿನ ಭಕ್ತರಿಗೆ ದೇವಿಯ ದರ್ಶನಕ್ಕೆ ಅವಕಾಶ ಕಲ್ಪಿಸಲಾಗುವುದು ಎಂದು ಹೇಳಿದರು.

ರಾಜ್ಯದ ವಿವಿಧ ಜಿಲ್ಲೆಗಳಲ್ಲದೆ ಹೊರ ರಾಜ್ಯಗಳಿಂದಲೂ ಲಕ್ಷಾಂತರ ಭಕ್ತರು ಆಗಮಿಸುವ ನಿರೀಕ್ಷೆಯಿದೆ. ಇದನ್ನು ಗಮನದಲ್ಲಿಟ್ಟುಕೊಂಡು ಜಿಲ್ಲಾಡಳಿತ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುತ್ತಿದೆ.

ಜಾತ್ರಾ ಮಹೋತ್ಸವದ ಸಂದರ್ಭದಲ್ಲಿ ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ದರ್ಶನ ವ್ಯವಸ್ಥೆ, ಮೂಲಸೌಕರ್ಯ, ಭದ್ರತೆ, ಸಂಚಾರ ನಿಯಂತ್ರಣ ಸೇರಿದಂತೆ ಅಗತ್ಯ ವ್ಯವಸ್ಥೆಗಳನ್ನು ಕಲ್ಪಿಸಲು ಜಿಲ್ಲಾಡಳಿತ ಸಜ್ಜಾಗಿದೆ ಎಂದು ಲತಾಕುಮಾರಿ ತಿಳಿಸಿದರು.

ಮೈಸೂರು ದಸರಾ ನಂತರ ನಡೆಯುವ ಹಾಸನಾಂಬ ಜಾತ್ರಾ ಮಹೋತ್ಸವವನ್ನು ಶ್ರದ್ಧಾ, ಭಕ್ತಿ, ಸಡಗರ, ಸಂಭ್ರಮದಿಂದ ಆಚರಿಸಲು ಜಿಲ್ಲಾಡಳಿತ ಎಲ್ಲ ರೀತಿಯಿಂದಲೂ ಸಜ್ಜಾಗಿದೆ. ಅ.29 ಗುರುವಾರ ಮಧ್ಯಾಹ್ನ 12 ಗಂಟೆಗೆ ಶಾಸ್ತ್ರೋಕ್ತವಾಗಿ ಹಾಸನಾಂಬ ದೇವಾಲಯದ ಗರ್ಭಗುಡಿ ಬಾಗಿಲು ತೆರೆಯಲಿದೆ.



### ನಾಳೆ ಪೋಸ್ಟರ್ ಬಿಡುಗಡೆ

ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ ಅವರ ಅಧ್ಯಕ್ಷತೆಯಲ್ಲಿ ಸೆ.26ರ ಶನಿವಾರ ಮಧ್ಯಾಹ್ನ 1 ಗಂಟೆಗೆ ಸುದ್ದಿಗೋಷ್ಠಿ ನಡೆಯಲಿದ್ದು, ಈ ಸಂದರ್ಭದಲ್ಲಿ ಹಾಸನಾಂಬ ಜಾತ್ರಾ ಮಹೋತ್ಸವದ ಸಂಪೂರ್ಣ ವೇಳಾಪಟ್ಟಿ ಪ್ರಕಟಿಸಲಾಗುವುದು. ಜೊತೆಗೆ ಜಾತ್ರಾ ಮಹೋತ್ಸವದ ಪೋಸ್ಟರ್ ಬಿಡುಗಡೆ ಹಾಗೂ ಅಧಿಕೃತ ವೆಬ್‌ಸೈಟ್ ಲೋಕಾರ್ಪಣೆ ಮಾಡಲಾಗುವುದು ಎಂದರು.

ಅಂದು ಸಾರ್ವಜನಿಕ ದರ್ಶನ ಇರುವುದಿಲ್ಲ. ಅ.30 ರಿಂದ ನ.10 ರವರೆಗೆ ಸಾರ್ವಜನಿಕ ದರ್ಶನಕ್ಕೆ ಅವಕಾಶ ಇರುತ್ತದೆ. ನ.11 ರಂದು ಮಧ್ಯಾಹ್ನ ಸಂಪ್ರದಾಯದಂತೆ ಗರ್ಭಗುಡಿ ಬಾಗಿಲು ಬಂದ್ ಆಗಲಿದೆ ಎಂದರು.

ಉತ್ಸವ ಸಂದರ್ಭದಲ್ಲಿ ವಿಶೇಷ ಕಾರ್ಯಕ್ರಮ ಆಯೋಜಿಸಲು ಸಿದ್ಧತೆ ನಡೆಸಿದ್ದೇವೆ. ಆಹಾರ ಮೇಳ, ಚಿತ್ರ ಸಂತೆ, ಸಾಂಸ್ಕೃತಿಕ, ಸಾಹಿತ್ಯ ವೈಭವವನ್ನು ಜನತೆಗೆ ತಲುಪಿಸಲು ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ ಎಂದು ವಿವರಿಸಿದರು.

### ಬರ ಹಿನ್ನೆಲೆ ಸರಳ ಸಡಗರ

ಜಿಲ್ಲೆಯಲ್ಲಿ ಈ ಬಾರಿ ಏಳು ತಾಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರಿಸಲಾಗಿದ್ದು, ಪರಿಸ್ಥಿತಿ ಗಮನದಲ್ಲಿಟ್ಟುಕೊಂಡು ಅತಿಯಾದ ಆಡಂಬರಕ್ಕೆ ಒತ್ತು ನೀಡದೆ, ಸಂಪ್ರದಾಯ ಹಾಗೂ ಧಾರ್ಮಿಕ ವಿಧಿವಿಧಾನಗಳಿಗೆ ಆದ್ಯತೆ ನೀಡಿ ಜಾತ್ರಾ ಮಹೋತ್ಸವವನ್ನು ಸಡಗರದಿಂದ ಆಚರಿಸಲು ನಿರ್ಧರಿಸಲಾಗಿದೆ. ಭಕ್ತರು ಹಾಗೂ ಸಾರ್ವಜನಿಕರಿಗೆ ಅಗತ್ಯ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ವಿವಿಧ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಸಿದ್ಧತೆ ನಡೆಸಲಾಗುತ್ತಿದೆ. ಅಚ್ಚುಕಟ್ಟಾಗಿ ಉತ್ಸವ ನಡೆಸಲು ಈಗಾಗಲೇ ಅನೇಕ ಸಮಿತಿ ರಚಿಸಿ ಜವಾಬ್ದಾರಿ ವಹಿಸಲಾಗಿದೆ ಎಂದು ಹೇಳಿದರು.

ಹಾಸನಾಂಬ ಉತ್ಸವವನ್ನು ಶ್ರದ್ಧಾ ಹಾಗೂ ಭಕ್ತಿಭಾವದಿಂದ ಸಂಪ್ರದಾಯಬದ್ಧವಾಗಿ ಆಚರಿಸಲಾಗುವುದು. ಭಕ್ತರ ಅನುಕೂಲಕ್ಕಾಗಿ ವಿಶೇಷ ಕಾರ್ಯಕ್ರಮಗಳನ್ನೂ ಆಯೋಜಿಸಲು ಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

# ಉತ್ತಮ ಮಳೆಗಾಗಿ ಜಿಲ್ಲಾ ಕಾಂಗ್ರೆಸ್‌ನಿಂದ ಪೂಜೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಉತ್ತಮ ಮಳೆಯಾಗಿ ರೈತರು ನೆಮ್ಮದಿಯ ಬದುಕು ಕಟ್ಟಿಕೊಳ್ಳಲಿ, ಕೆರೆ ಕಟ್ಟೆಗಳು ಭರ್ತಿಯಾಗಿ ಜಾನುವಾರುಗಳಿಗೆ ತೊಂದರೆ ತಪ್ಪಲಿ ಎಂದು ಪ್ರಾರ್ಥಿಸಿ ಗುರುವಾರ ಜಿಲ್ಲಾ ಕಾಂಗ್ರೆಸ್ ವತಿಯಿಂದ ಪೆಂಡಾಲ್ ಗಣಪತಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು.

ಕಾಂಗ್ರೆಸ್ ಜಿಲ್ಲಾಧ್ಯಕ್ಷ ಜಿ.ಬಿ.ಶಶಿಧರ್ ಮಾತನಾಡಿ, ಜನರು ಪ್ರಸ್ತುತ ಬರ ಪರಿಸ್ಥಿತಿಯನ್ನು ಎದುರಿಸುತ್ತಿದ್ದಾರೆ. ವಿಘ್ನೇಶ್ವರನಲ್ಲಿ ಉತ್ತಮ ಮಳೆ ಹಾಗು ಸಮೃದ್ಧ ಬೆಳೆಗಾಗಿ ಪ್ರಾರ್ಥಿಸಲಾಗಿದೆ. ಮಳೆ-ಬೆಳೆ ಉತ್ತಮವಾದರೆ ರೈತರು ಸೇರಿ ಎಲ್ಲರ ಬದುಕು ಸುಧಾರಿಸಲಿದೆ ಎಂದರು.

ಗಣಪತಿ ಪೆಂಡಾಲ್‌ನಲ್ಲಿ ಕಳೆದ 72 ವರ್ಷಗಳಿಂದ ಗಣೇಶ ಮೂರ್ತಿ ಪ್ರತಿಷ್ಠಾಪಿಸಲಾಗುತ್ತಿದೆ. ಯಾವ ಪಕ್ಷ ಭೇದವಿಲ್ಲದೆ ಹಾಸನದ ಸರ್ವ ಜನರಿಗೂ ಒಳಿತಾಗಲಿ, ಎಲ್ಲರ ಜೀವನದಲ್ಲಿ ಸುಖ, ಶಾಂತಿ ಮತ್ತು ಸಮೃದ್ಧಿ ನೆಲೆಸಲಿ ಎಂಬ ಆಶಯದಿಂದ ಪೂಜೆ ಸಲ್ಲಿಸಲಾಗಿದೆ ಎಂದು ತಿಳಿಸಿದರು.

### ಸಚಿವರ ವಿರುದ್ಧ ಸುಳ್ಳು ಆರೋಪ

ಸಕಲೇಶಪುರದಲ್ಲಿ ಇತ್ತೀಚೆಗೆ ನಡೆದ ಪ್ರಜಾ ಸೇವೆ ಆಂದೋಲನದಲ್ಲಿ ಸಚಿವ ಕೆ.ಎಂ.ಶಿವಲಿಂಗೇಗೌಡ ಅವರು ಲಂಚಕ್ಕೆ



ಪ್ರೇರಣೆ ನೀಡಿದ್ದಾರೆಂಬ ಅರ್ಥದಲ್ಲಿ ವಿರೋಧ ಪಕ್ಷಗಳು

ಅಪಪ್ರಚಾರ ಮಾಡುತ್ತಿವೆ ಎಂದು ಕಾಂಗ್ರೆಸ್ ಜಿಲ್ಲಾಧ್ಯಕ್ಷ ಜಿ.ಬಿ.ಶಶಿಧರ್ ಹೇಳಿದರು. ಸುದ್ದಿಗಾರರೊಂದಿಗೆ ಗುರುವಾರ ಮಾತನಾಡಿದ ಅವರು, ಕೆಲಸ ಮಾಡಿ ಕೊಟ್ಟ ಅಧಿಕಾರಿಗೆ ಗೌರವವಯುತವಾಗಿ ಕೊಡಬೇಕೆಂಬ ಹೇಳಿಕೆಗೆ ಸಚಿವರು ಈಗಾಗಲೇ ಸ್ಪಷ್ಟನೆ ನೀಡಿದ್ದಾರೆ.

ಕಾರ್ಯಕ್ರಮದ ಸಂಪೂರ್ಣ ಹಿನ್ನಲೆ ಮತ್ತು ಸಚಿವರು ನೀಡಿದ ವಿವರಣೆ ಗಮನಿಸದೆ ಸಾಮಾಜಿಕ ಜಾಲತಾಣಗಳಲ್ಲಿ ಅಪಪ್ರಚಾರ ನಡೆಸಲಾಗುತ್ತಿದೆ. ಸರ್ಕಾರದ ಸೇವೆಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸಿ ಜನರ ಕುಂದು-ಕೊರತೆಗೆ ಪರಿಹಾರ ಕಲ್ಪಿಸುವುದಾಗಿದೆ. ಅರಸೀಕೆರೆ ಹಾಗು ಸಕಲೇಶಪುರದಲ್ಲಿ ನಡೆದ ಕಾರ್ಯಕ್ರಮಗಳಲ್ಲಿ ಪಹಣಿ, ಸರ್ವೆ, ಪೋಡಿ ಸೇರಿ ವಿವಿಧ ಸಮಸ್ಯೆಗಳ ಕುರಿತು ಸಾರ್ವಜನಿಕರಿಂದ ಅರ್ಜಿಗಳನ್ನು ಸ್ವೀಕರಿಸಿ, ಅಧಿಕಾರಿಗಳ ಸಮ್ಮುಖದಲ್ಲಿ ಪರಿಹಾರ ಕಂಡುಕೊಳ್ಳುವ ಪ್ರಯತ್ನ ನಡೆದಿದೆ ಎಂದರು.

ಸರ್ಕಾರದ ಜನಪರ ಕಾರ್ಯಕ್ರಮಗಳನ್ನು ಜನರ ಮನೆ ಬಾಗಿಲಿಗೆ ಕೊಂಡೊಯ್ಯುತ್ತಿರುವ ಸಂದರ್ಭದಲ್ಲಿ ಕೆಲವರು ರಾಜಕೀಯ ಕಾರಣಕ್ಕಾಗಿ ವಿಚಾರವನ್ನು ಬೇರೆ ರೀತಿಯಲ್ಲಿ ಬಿಂಬಿಸುತ್ತಿದ್ದಾರೆ. ಜನರು ಸಂಪೂರ್ಣ ವಿಚಾರವನ್ನು ಗಮನಿಸಿ ವಾಸ್ತವಾಂಶ ಅರಿತುಕೊಳ್ಳಬೇಕು ಎಂದರು.

ಕಾಂಗ್ರೆಸ್ ಮುಖಂಡ ಬನವಾಸೆ ರಂಗಸ್ವಾಮಿ ಮಾತನಾಡಿ, ಸಚಿವ ಶಿವಲಿಂಗೇಗೌಡ ಅವರ ಬೆಂಬಲಕ್ಕೆ ಜಿಲ್ಲಾ ಕಾಂಗ್ರೆಸ್ ಸಮಿತಿ ಹಾಗು ಕಾರ್ಯಕರ್ತರು ಇದ್ದಾರೆ. ಸಚಿವರ ವಿರುದ್ಧ ಪ್ರತಿಭಟನೆ ಅಥವಾ ಹೋರಾಟ ನಡೆದರೆ ಪಕ್ಷದ ವತಿಯಿಂದಲೂ ಪ್ರತಿಕ್ರಿಯೆ ನೀಡಲಾಗುವುದೆಂದರು.

ನೂತನ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರೊಂದಿಗೆ ಸಚಿವ ಶಿವಲಿಂಗೇಗೌಡ ಅವರ ನೇತೃತ್ವದಲ್ಲಿ ಜಿಲ್ಲೆಯಾದ್ಯಂತ ಜನಪರ ಕಾರ್ಯಕ್ರಮಗಳನ್ನು ನಡೆಸಲು ರೂಪುರೇಷೆ ಸಿದ್ಧಪಡಿಸಲಾಗುತ್ತಿದೆ. ಎಲ್ಲಾ ತಾಲ್ಲೂಕುಗಳಲ್ಲೂ ಕಾರ್ಯಕರ್ತರ ಸಭೆ ನಡೆಸಿ ಪಕ್ಷ ಸಂಘಟನೆಯನ್ನು ಬಲಪಡಿಸಲಾಗುವುದೆಂದರು.

ಜಿಲ್ಲೆಯಲ್ಲಿ ಅಧಿಕಾರಿಗಳು ತಮ್ಮ ಕರ್ತವ್ಯ ನಿರ್ವಹಿಸುತ್ತಿದ್ದು, ಆಡಳಿತ ವ್ಯವಸ್ಥೆ ಸುಗಮವಾಗಿ ನಡೆಯುತ್ತಿದೆ. ಸಚಿವರ ವಿರುದ್ಧದ ವಿಚಾರ ಮುಂದಿಟ್ಟುಕೊಂಡು ಅನಗತ್ಯ ರಾಜಕೀಯ ಮಾಡುವುದನ್ನು ಕಾಂಗ್ರೆಸ್ ಖಂಡಿಸುತ್ತದೆ ಎಂದು ತಿಳಿಸಿದರು.

ಪಕ್ಷದ ಮುಖಂಡರಾದ ದಾಸರಕೊಪ್ಪಲು ರಘು, ಲವ, ಪ್ರಕಾಶ್, ಅನು, ಕುಮಾರಸ್ವಾಮಿ, ಇರ್ಫಾನ್ ಇತರರಿದ್ದರು.

# ಸಚಿವರ ಲಂಚದ ಹೇಳಿಕೆ ಖಂಡಿಸಿ ರಾಜ್ಯಪಾಲರಿಗೆ ಮನವಿ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಹಿಂದು ಕಾರ್ಯಕರ್ತರ ವಿರುದ್ಧ ವಿವಿಧ ಕಾಯ್ದೆಗಳಡಿ ಪ್ರಕರಣ ದಾಖಲಿಸಿ ಸಂಘಟನೆಗಳನ್ನು ಹತ್ತಿಕ್ಕುವ ಪ್ರಯತ್ನ ನಡೆಯುತ್ತಿದೆ ಹಾಗೂ ಪ್ರಜಾಸೇವಾ ಆಂದೋಲನದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಅವರು ಅಧಿಕಾರಿಗಳಿಗೆ ಲಂಚ ನೀಡುವ ಕುರಿತು ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಿ ಹಿಂದು ಹಿತರಕ್ಷಣಾ ವೇದಿಕೆ ಕಾರ್ಯಕರ್ತರು ತಾಲೂಕು ಕಚೇರಿ ಎದುರು ಪ್ರತಿಭಟನೆ ನಡೆಸಿದರು. ಬಳಿಕ ಉಪವಿಭಾಗಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.

ಹಿಂದು ಕಾರ್ಯಕರ್ತರು ಹಾಗೂ ಸಂಘಟನೆಗಳನ್ನು ಗುರಿಯಾಗಿಸಿಕೊಂಡು ಕೋಕಾ, ಗೂಂಡಾ ಕಾಯ್ದೆ ಸೇರಿ ವಿವಿಧ ಕಾನೂನುಗಳಡಿ ಪ್ರಕರಣ ದಾಖಲಿಸಲಾಗುತ್ತಿದೆ ಎಂದು ಆರೋಪಿಸಿದರು. ಸೆ.19ರಂದು ನಡೆದ ಪ್ರಜಾಸೇವಾ ಆಂದೋಲನದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಅಧಿಕಾರಿಗಳಿಗೆ ಗೌರವಯುತವಾಗಿ ಕೊಡುವುದು ಧರ್ಮ ಎಂಬ ಹೇಳಿಕೆ ವಿವಾದಕ್ಕೆ ಕಾರಣವಾಗಿದ್ದು, ಈ ಕುರಿತು ಸಮಗ್ರ ತನಿಖೆ ನಡೆಸಬೇಕೆಂದು ಆಗ್ರಹಿಸಿದರು.

ಸಚಿವ ಕೆ.ಎಂ. ಶಿವಲಿಂಗೇಗೌಡ ಅವರನ್ನು ಜಿಲ್ಲಾ ಉಸ್ತುವಾರಿ ಸಚಿವ ಸ್ಥಾನದಿಂದ ಬದಲಾಯಿಸಿ, ಸಚಿವ ಸಂಪುಟದಿಂದ ವಜಾಗೊಳಿಸಬೇಕು ಎಂದು ವೇದಿಕೆ ಆಗ್ರಹಿಸಿದರು. ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ರಾಜ್ಯದ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಹಿಂದು ಮುಖಂಡ ರಘು, ಹಿಂದೂ ಹಿತರಕ್ಷಣಾ ವೇದಿಕೆಯ ಸಂಯೋಜಕ ಶಿವು ಜಿಪ್ಪಿ, ಕೌಶಿಕ್ ಎಚ್.ಎಂ., ಜಿತ್ ಗೌಡ, ವಿಜಿತ್ ಗೌಡ, ಶೇಖರ್ ಪೂಜಾರಿ, ದಿಲೀಪ್ ಕುಶಾಲನಗರ, ಸುಪ್ರೀತ್, ಹರ್ಷ, ಕಬ್ಬಿನಗದ್ದೆ ಶೇಖರ್, ಹೆಬ್ಬಸಾಲೆ ರವಿ, ಮಹೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸೋಮನಹಳ್ಳಿ ಕಾವಲಿನಲ್ಲಿ ಆಲೂಗಡ್ಡೆ ಕ್ಷೇತ್ರೋತ್ಸವ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯಲ್ಲಿ ಆಲೂಗಡ್ಡೆ ಬೆಳೆಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ತೋಟಗಾರಿಕೆ ಇಲಾಖೆಯಿಂದ ಕುಫ್ರಿ ಕರಣ್ ಹೊಸ ತಳಿಯನ್ನು ಪರಿಚಯಿಸಿದ್ದು, ರೈತರಿಗೆ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ವಿವಿಧ ಭಾಗದಲ್ಲಿ ಕ್ಷೇತ್ರೋತ್ಸವ ಹಮ್ಮಿಕೊಂಡಿದೆ.

ಬೈರಾಪುರ, ಗೌರಿಪುರ, ಸೋಮನಹಳ್ಳಿ ಕಾವಲು ವಿವಿಧಡೆ ರೈತರನ್ನು ಒಗ್ಗೂಡಿಸಿ ಕ್ಷೇತ್ರೋತ್ಸವ ಏರ್ಪಡಿಸಲಾಗಿದೆ. ಗುರುವಾರ ತಾಲ್ಲೂಕಿನ ಸೋಮನಹಳ್ಳಿ ಕಾವಲು ಗ್ರಾಮದಲ್ಲಿ ದೀಪಕ್ ಎಂಬುವವರ ಜಮೀನಿನಲ್ಲಿ ಆಲೂಗಡ್ಡೆ-ಕುಫ್ರಿ ಕರಣ್ ತಳಿಯ ಕ್ಷೇತ್ರೋತ್ಸವ ಉದ್ಘಾಟಿಸಿ ಮಾತನಾಡಿದ ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಯೋಗೇಶ್ ಅವರು, ಜಿಲ್ಲೆಯಲ್ಲಿ ಹಲವು ವರ್ಷಗಳಿಂದ ಆಲೂಗಡ್ಡೆ ಬೆಳೆಯುತ್ತಿದ್ದಿರಿ. ಇತ್ತೀಚೆಗೆ ಕೆಲವು ಕಾರಣಗಳಿಂದ ಆಲೂಗಡ್ಡೆ ಬೆಳೆಯುವ ಪ್ರದೇಶ ಕಡಿಮೆಯಾಗಿದೆ. ತೋಟಗಾರಿಕೆ ಇಲಾಖೆ ಈ ವಿಚಾರವನ್ನು ಸರ್ಕಾರಕ್ಕೆ ಮನವರಿಕೆ ಮಾಡುವ ಕೆಲಸ ಮಾಡುತ್ತಿದೆ ಎಂದರು.



20 ವರ್ಷದ ಹಿಂದೆ ಜಿಲ್ಲೆಯಲ್ಲಿ 1.25 ಲಕ್ಷ ಎಕರೆ ಪ್ರದೇಶದಲ್ಲಿ ಆಲೂಗಡ್ಡೆ ಬೆಳೆಯಲಾಗುತ್ತಿತ್ತು. 2005ರಲ್ಲಿ ಅಂಗಮಾರಿ ರೋಗ ವ್ಯಾಪಿಸಿದ ಪರಿಣಾಮ ಶೇ. 70ರಷ್ಟು ಕುಸಿತ ಕಂಡಿದೆ ಎಂದು ವಿವರಿಸಿದರು.

ಒಂದು ಸಮಯದಲ್ಲಿ ಸೋಮನಹಳ್ಳಿ ಕಾವಲು ಆಲೂಗಡ್ಡೆ ಬೆಳೆಗೆ ಹೆಸರುವಾಸಿಯಾಗಿತ್ತು. 1968ರ ಕಾಲಘಟ್ಟದಲ್ಲಿ ಡಾ.ಎಂ.ಹೆಚ್. ಮರಿಗೌಡ ಅವರ ಕಾಲದಲ್ಲಿ ರಾಜ್ಯದಲ್ಲೇ ಮೊದಲ ಬಾರಿಗೆ ಹಾಸನ ಜಿಲ್ಲೆಗೆ ಆಲೂ ಸಂರಕ್ಷಣೆಗೆ ಕೋಲ್ಡ್ ಸ್ಟೋರೇಜ್ ತರಲಾಯಿತು. ಪ್ರಸ್ತುತ ಅದು ಶಿಥಿಲಗೊಂಡಿದ್ದು, ಈಗ ಹೊಸದಾಗಿ ಸುಸಜ್ಜಿತ ಕೋಲ್ಡ್ ಸ್ಟೋರೇಜ್ ನಿರ್ಮಾಣ ಮಾಡಲಾಗುತ್ತಿದೆ ಎಂದರು.

ಆಲೂ ವಿಶಿಷ್ಟ ಬೆಳೆಯಾಗಿದ್ದು, ತರಕಾರಿ, ಆಹಾರ ಬೆಳೆಯೂ ಹೌದು. ದೇಶದ ಉತ್ತರ ಭಾಗದಲ್ಲಿ ಆಲೂ ನಿತ್ಯದ ಆಹಾರವಾಗಿದೆ. ಪ್ರಪಂಚದ ಇತರೆ ದೇಶಗಳಲ್ಲಿ ಆಲೂ ಅವಲಂಬಿಸಿದ್ದಾರೆ. ಆಲೂಗಡ್ಡೆಯ ಮಹತ್ವ ಅರಿತು ರೈತರು ಹೆಚ್ಚು-ಹೆಚ್ಚು ಬೆಳೆಯುವಂತಾಗಬೇಕು ಎಂದರು.

ಮುಂಗಾರು ಹಂಗಾಮಿನಲ್ಲಿ ಆಲೂಗಡ್ಡೆ ಬೆಳೆಯುವಲ್ಲಿ ಜಿಲ್ಲೆ ಅಗ್ರ ಸ್ಥಾನದಲ್ಲಿತ್ತು. ಜಿಲ್ಲೆಯಲ್ಲಿ ಮುಂಗಾರು, ಹಿಂಗಾರು ಎರಡು ಅವಧಿಯಲ್ಲೂ ಬೆಳೆಯಬಹುದಾಗಿದೆ. ರೋಗ ನಿಯಂತ್ರಣಕ್ಕೆ ಸಂಶೋಧನೆ ನಡೆಯುತ್ತಿದೆ. ಈಗ ಅಂಗಮಾರಿ ರೋಗಕ್ಕೆ ಔಷಧಿಗಳ ಕಂಡು ಹಿಡಿಯಲಾಗಿದೆ ಎಂದರು.

ಜ್ಯೋತಿ, ಹಿಮಾಲಿನಿ ತಳಿಯ ಆಲೂಗಡ್ಡೆಗೆ 3 ರಿಂದ 5 ಬಾರಿ ಔಷಧಿ ಸಿಂಪಡಿಸಬೇಕು. ಕುಫ್ರಿ ಕರಣ್ ತಳಿ ಅಂಗಮಾರಿ ರೋಗ ತಡೆಯುವ ಶಕ್ತಿ ಹೊಂದಿದ್ದು, ಔಷಧಿ ಸಿಂಪಡಿಸದೆ ಕಡಿಮೆ ಖರ್ಚಿನಲ್ಲಿ ಉತ್ತಮ ಇಳುವರಿ ನೀಡುತ್ತಿದೆ. ಈ ತಳಿಯ ಬಗ್ಗೆ ರೈತರು ತಿಳಿದು ಎಲ್ಲರೂ ಬೆಳೆಯುವಂತಾಗಬೇಕು. ಈ ಬಗ್ಗೆ ಹೆಚ್ಚು-ಹೆಚ್ಚು ಜಾಗೃತಿ ಮೂಡಿಸುವ ಕೆಲಸವಾಗಬೇಕು. ರೈತರು ಸಸಿ ತಂದು ಬೆಳೆಸಿ, ಬೀಜವನ್ನು ಗ್ರಾಮಗಳಲ್ಲೇ ಉತ್ಪಾದಿಸುವಂತಾಗಲಿ ಎಂದು ಹೇಳಿದರು.

ಕಂದಲಿ ಕೆವಿಕೆ ಕೇಂದ್ರದ ಡಾ.ಭರತ್, ಮಂಜುನಾಥ್ ಶೆಟ್ಟಿ, ಐಟಿಸಿ ಕಂಪನಿಯ ಅಸ್ಲಾಮ್, ಗ್ರಾಮದ ಶಿವಲಿಂಗ, ಸೋಮೇಶ್ ಮತ್ತಿತರರಿದ್ದರು.

# ಕೈಗಾರಿಕಾ ಕಸಬುದಾರರ ಸಂಘಕ್ಕೆ 1.05 ಲಕ್ಷ ರೂ. ಲಾಭ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ತಾಲ್ಲೂಕು ಕೈಗಾರಿಕಾ ಕಸುಬುದಾರರ ವಿವಿದೋದ್ದೇಶ ಸಹಕಾರ ಸಂಘ 2025-26ನೇ ಸಾಲಿನಲ್ಲಿ 1.10 ಕೋಟಿ ರೂ. ವಹಿವಾಟು ನಡೆಸಿದ್ದು 1.05 ಲಕ್ಷ ರೂ. ಲಾಭ ಗಳಿಸಿದೆ ಎಂದು ಸಂಘದ ಅಧ್ಯಕ್ಷ ಮಲ್ಲೇಶಪ್ಪ ತಿಳಿಸಿದರು.

ಇತ್ತೀಚೆಗೆ ನಡೆದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಂಘ 325 ಸದಸ್ಯಬಲ ಹೊಂದಿದ್ದು 5.5 ಲಕ್ಷ ರೂ. ಷೇರು ಬಂಡವಾಳ ಹೊಂದಿದೆ. ಸದಸ್ಯರಿಗೆ 45 ಲಕ್ಷ ರೂ. ಸಾಲ ವಿತರಿಸಿದ್ದು ಶೇ. 95 ರಷ್ಟು ವಸೂಲಾತಿಯಾಗಿದೆ. ಸಂಘ ಸಣ್ಣ ಪುಟ್ಟ ವ್ಯಾಪಾರಸ್ಥರಿಗೆ ಸಾಲ ನೀಡಿ ಅವರ ಬದುಕಿಕೆ ನೆರವು ನೀಡುತ್ತಾ ಬಂದಿದೆ. ಸಾಲ ಪಡೆದ ಸದಸ್ಯರು ನಿಗದಿತ ಸಮಯಕ್ಕೆ ಸರಿಯಾಗಿ ಮರುಪಾವತಿ ಮಾಡಿದರೆ ಹೆಚ್ಚಿನ ಸಾಲ ನೀಡಲು ಸಾಧ್ಯಾವಾಗುತ್ತದೆ ಮತ್ತು ಹೆಚ್ಚಿನ ಜನರಿಗೆ ಇದರ ಪ್ರಯೋಜನ ದೊರಕುತ್ತದೆ. ಸಂಘದ ಅಭಿವೃದ್ಧಿಗೆ ಎಲ್ಲರ ಸಹಕಾರ ಅಗತ್ಯ ಎಂದರು.

ಕಾರ್ಯದರ್ಶಿ ಯೋಗೇಂದ್ರ ವಾರ್ಷಿಕ ವರದಿ ಮಂಡಿಸಿದರು. ಸದಸ್ಯರಾದ ಸುಬ್ಬೇಗೌಡ, ಸಿ.ಜಿ. ವೆಂಕಟೇಶ್, ಎ.ಜೆ.ಬಾಲು, ಪಿ.ಟಿ.ಕೇಶವೇಗೌಡ, ಬಿ.ಜೆ.ನಾಗ, ರಂಗಸ್ವಾಮಿ, ಎ.ಜಿ.ಭಾಸ್ಕರ್, ಎಂ.ಕೆ. ಶಿವಣ್ಣ, ಟಿ.ಆರ್. ಮಂಜುಳ, ಎಂ.ಕೆ. ಕೋಮಲ, ಸಿಬ್ಬಂದಿ ಸಿ.ಆರ್. ಕಾಂತ, ಕೃಷ್ಣಪ್ಪ ಉಪಸ್ಥಿತರಿದ್ದರು.

# ಇಂದು ಆಕೃತಿ ಬಟ್ಟೆ ಅಂಗಡಿ ಲೋಕಾರ್ಪಣೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಕುವೆಂಪು ನಗರದ ಸಬ್ ರಿಜಿಸ್ಟ್ರಾರ್ ಕಚೇರಿ ರಸ್ತೆಯಲ್ಲಿ ನೂತನವಾಗಿ ಸಿದ್ಧ ಹಾಗೂ ಮಹಿಳೆಯರಿಗೊಪ್ಪುವ ಆಕೃತಿ ಬಟ್ಟೆ ಅಂಗಡಿ ಆರಂಭಗೊಳ್ಳುತ್ತಿದ್ದು, ಕನ್ನಡದ ಹಿರಿಯ ನಟ ಕ್ರೇಜಿಸ್ಟಾರ್ ರವಿಚಂದ್ರನ್ ನಾಳೆ ಬೆಳಗ್ಗೆ ಲೋಕಾರ್ಪಣೆ ಮಾಡಲಿದ್ದಾರೆ.

ಶುಕ್ರವಾರ ಬೆಳಗ್ಗೆ 11 ಗಂಟೆಗೆ ಉದ್ಘಾಟನಾ ಕಾರ್ಯಕ್ರಮ ನಡೆಯುಲಿದ್ದು, ನಗರದ ಎಲ್ಲ ನಾಗರಿಕರು ಆಗಮಿಸಿ ಯಶಸ್ವಿಗೊಳಿಸುವಂತೆ ಆಕೃತಿಯ ಸುನಿಲ್ ಮನವಿ ಮಾಡಿದರು.

18-80 ವರ್ಷದ ವರೆಗಿನ ಯುವತಿಯರು, ಮಹಿಳೆಯರಿಗೆ ಒಪ್ಪುವ ಕುರ್ತಿಸ್, ಚೂಡಿದಾರ, ಲೆಹೆಂಗಾಸ್, ಡ್ರೆಸ್ ಮೆಟೀರಿಯಲ್ಸ್, ವೆಸ್ಟರ್ನ್ ವೇರ್, ಮಿಕ್ಸ್ ಅಂಡ್ ಮ್ಯಾಚ್, ಲೌಂಟ್ ವೇರ್, ಗಾಗ್ರಾಸ್, ಮೊದಲಾದ ನವನವೀನ ಬಣ್ಣದ ಬಟ್ಟೆಗಳು ವಿಶಾಲವಾದ ಮಳಿಗೆಯಲ್ಲಿ ಒಂದೇ ಸೂರಿನಡಿ ಕೈಗೆಟಕುವ ದರದಲ್ಲಿ ದೊರೆಯಲಿವೆ ಎಂದರು.

300-400 ರೂ.ಗಳಿಂದ 10 ಸಾವಿರದವರೆಗೂ ಅವರವರ ಅಭಿರುಚಿಗೆ ಒಪ್ಪುವ ವಸ್ತ್ರಗಳು ಸಿಗಲಿವೆ. ಉದ್ಘಾಟನೆ ಕೊಡುಗೆಯಾಗಿ 1 ಟೀಶರ್ಟ್‌ಗೆ 125 ರೂ., ಶರ್ಟ್ ಟಾಪ್ 1ಕ್ಕೆ 333 ರೂ., ನೀ ಟಾಪ್ 1 ಕ್ಕೆ 222 ಮತ್ತು 399 ರೂ., ನೈಟ್ ಸೂಟ್ 1 ಪೀಸ್‌ಗೆ 444 ರೂ., ಕುರ್ತಿಸ್ 1ಕ್ಕೆ 333, 444 ಮತ್ತು 555 ರೂ., ಕಾರ್ಡ್ ಸೆಟ್ 1 ಪೀಸ್‌ಗೆ 666 ರೂ., ಕುರ್ತಿಸ್ ಸೆಟ್ 1ಕ್ಕೆ 444, 555, 666,777 ರೂ. ಮತ್ತು ನೈಟೀಸ್ 2 ಪೀಸ್‌ಗೆ 333, 3ಕ್ಕೆ 777 ಮತ್ತು 999 ರೂ.ಗೆ ಕೊಡಲಾಗುವುದು ಎಂದರು. ಇದೇ ರೀತಿಯ ಆಫರ್ ಮುಂದೆಯೂ ಇರಲಿದೆ ಎಂದರು.

ನಮ್ಮ ಶೋರೂಂ ಗಳು ತಮಿಳುನಾಡು, ಆಂಧ್ರ ಪ್ರದೇಶ, ತೆಲಂಗಾಣ, ಒಡಿಸ್ಸಾ, ಸಿಂಗಾಪೂರ್ ಸೇರಿ 100ಕ್ಕೂ ಹೆಚ್ಚು ಶಾಖೆಗಳಿವೆ. ಹೆಚ್ಚು ಹೆಚ್ಚು ಗ್ರಾಹಕರು ಭೇಟಿ ನೀಡುವ ಮೂಲಕ ನಮ್ಮ ವ್ಯಾಪಾರಕ್ಕೆ ಪ್ರೋತ್ಸಾಹ ನೀಡಬೇಕು ಎಂದು ಮನವಿ ಮಾಡಿದರು.

# ಖಾಸಗಿ ಆಸ್ಪತ್ರೆಗಳ ಕಾನೂನು ಬಿಗಿಗೊಳಿಸಲು ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಅನೇಕ ಖಾಸಗಿ ಆಸ್ಪತ್ರೆಗಳು ಸರ್ಕಾರದ ನಿಯಮ ಉಲ್ಲಂಘಿಸಿ ಕಾರ್ಯನಿರ್ವಹಿಸುತ್ತಿದ್ದು, ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸದ ಕಾರಣ ವಾಹನ ದಟ್ಟಣೆ ಹಾಗೂ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿದೆ ಎಂದು ಆಮ್ ಆದ್ಮಿ ಪಾರ್ಟಿ ರಾಜ್ಯ ಉಪಾಧ್ಯಕ್ಷ ಅಗಿಲೆ ಯೋಗೀಶ್ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿ, ನಗರದ ಶೇ.90ರಷ್ಟು ಖಾಸಗಿ ಆಸ್ಪತ್ರೆಗಳಲ್ಲಿ ಸಮರ್ಪಕ ಪಾರ್ಕಿಂಗ್ ವ್ಯವಸ್ಥೆ ಇಲ್ಲದಿರುವುದರಿಂದ ರೋಗಿಗಳು ಹಾಗೂ ಅವರ ಕುಟುಂಬಸ್ಥರು ರಸ್ತೆ ಬದಿಯಲ್ಲಿ ವಾಹನ ನಿಲುಗಡೆ ಮಾಡುವಂತಾಗಿದೆ. ಇದರಿಂದ ಪ್ರಮುಖ ರಸ್ತೆಗಳಲ್ಲಿ ಸಂಚಾರ ದಟ್ಟಣೆ ಹೆಚ್ಚುತ್ತಿದೆ ಎಂದರು.

ನಗರದ ಶಂಕರಮಠ ರಸ್ತೆಯಲ್ಲಿ ಹಲವು ಆಸ್ಪತ್ರೆಗಳು ಹಾಗೂ ಖಾಸಗಿ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ. ಬಹುತೇಕ ಸಂಸ್ಥೆಗಳು ಪಾರ್ಕಿಂಗ್‌ಗೆ ಅಗತ್ಯ ಸ್ಥಳಾವಕಾಶ ಕಲ್ಪಿಸದಿರುವುದರಿಂದ ಈ ರಸ್ತೆಯಲ್ಲಿ ವಾಹನ ಸಂಚಾರಕ್ಕೆ ತೀವ್ರ ಅಡಚಣೆ ಉಂಟಾಗುತ್ತಿದೆ. ಪ್ರತಿದಿನ ಸಾರ್ವಜನಿಕರು ಸಮಸ್ಯೆ ಎದುರಿಸುತ್ತಿದ್ದರೂ ಮಹಾನಗರ ಪಾಲಿಕೆ ಸೂಕ್ತ ಕ್ರಮ ಕೈಗೊಳ್ಳುತ್ತಿಲ್ಲ ಎಂದು ದೂರಿದರು.



ನಿಯಮ ಉಲ್ಲಂಘಿಸುವ ಆಸ್ಪತ್ರೆಗಳ ವಿರುದ್ಧ ಕ್ರಮ ಕೈಗೊಳ್ಳಬೇಕಾದ ಜಿಲ್ಲಾಡಳಿತ ಹಾಗೂ ಮಹಾನಗರ ಪಾಲಿಕೆ ಈವರೆಗೆ ಯಾವುದೇ ಪರಿಣಾಮಕಾರಿ ಕ್ರಮ ಕೈಗೊಂಡಿಲ್ಲ. ಅಧಿಕಾರಿಗಳು ಖಾಸಗಿ ಆಸ್ಪತ್ರೆಗಳೊಂದಿಗೆ ಶಾಮೀಲಾಗಿರುವ ಕಾರಣ ಈ ಪರಿಸ್ಥಿತಿ ನಿರ್ಮಾಣವಾಗಿದೆ ಎಂಬ ಅನುಮಾನ ಸಾರ್ವಜನಿಕರಲ್ಲಿ ಮೂಡಿದೆ ಎಂದು ಅವರು ಆರೋಪಿಸಿದರು.

ಖಾಸಗಿ ಆಸ್ಪತ್ರೆಗಳಲ್ಲಿ ಆಯುಷ್ಮಾನ್ ಭಾರತ್ ಸೇರಿ ವಿವಿಧ ಸರ್ಕಾರಿ ಆರೋಗ್ಯ ವಿಮಾ ಯೋಜನೆಗಳ ಸೌಲಭ್ಯವಿದ್ದರೂ, ಕೆಲವು ಆಸ್ಪತ್ರೆಗಳು ರೋಗಿಗಳಿಂದ ಹೆಚ್ಚುವರಿ ಹಣ ವಸೂಲಿ ಮಾಡುತ್ತಿವೆ ಎಂಬ ದೂರುಗಳು ಕೇಳಿಬರುತ್ತಿವೆ. ಯೋಜನೆಯಡಿ ಉಚಿತವಾಗಿ ದೊರೆಯಬೇಕಾದ ಚಿಕಿತ್ಸೆ ಗೆ ವಿವಿಧ ಪರೀಕ್ಷೆ ಹಾಗೂ ಚಿಕಿತ್ಸೆ ಹೆಸರಿನಲ್ಲಿ ಹೆಚ್ಚಿನ ಮೊತ್ತ ವಸೂಲಿ ಮಾಡಲಾಗುತ್ತಿದೆ

ಎಂಬ ಆರೋಪಗಳ ಕುರಿತು ಜಿಲ್ಲಾಡಳಿತ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಸರ್ಕಾರಿ ಆಸ್ಪತ್ರೆಗಳಲ್ಲಿ ಕರ್ತವ್ಯ ನಿರ್ವಹಿಸುವ ಕೆಲವು ವೈದ್ಯರು ಖಾಸಗಿ ಆಸ್ಪತ್ರೆಗಳಲ್ಲಿಯೂ ಸೇವೆ ಸಲ್ಲಿಸುತ್ತಿದ್ದಾರೆ. ಕೆಲವರು ಸ್ವಂತ ಖಾಸಗಿ ಆಸ್ಪತ್ರೆಗಳನ್ನು ನಡೆಸುತ್ತಿದ್ದಾರೆ ಎಂಬ ಆರೋಪಗಳಿವೆ. ಸರ್ಕಾರಿ ಆಸ್ಪತ್ರೆಯಲ್ಲಿ ಹಾಜರಾತಿ ದಾಖಲಿಸಿ, ಅದೇ ಅವಧಿಯಲ್ಲಿ ಖಾಸಗಿ ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸುವ ಪ್ರಕರಣಗಳಿದ್ದರೆ ಅವುಗಳ ಬಗ್ಗೆ ತನಿಖೆ ನಡೆಸಿ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಪತ್ರಿಕಾಗೋಷ್ಠಿಯಲ್ಲಿ ಆಪ್ ಜಿಲ್ಲಾಧ್ಯಕ್ಷ ಆನಂದ್ ತೇಜೂರು, ನಗರಾಧ್ಯಕ್ಷ ಮಧು, ತಾಲೂಕು ಅಧ್ಯಕ್ಷ ಮಂಜುನಾಥ್, ಖಾದರ್ ಇದ್ದರು.

# ಚಂಗಡಿಹಳ್ಳಿಯಲ್ಲಿ ಪುನರುತ್ಪಾದಕ ಕೃಷಿ ತರಬೇತಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಯಸಳೂರು ಹೋಬಳಿಯ ಚಂಗಡಿಹಳ್ಳಿ ಗ್ರಾಮದಲ್ಲಿ ರುದ್ರಗಿರಿ ಪ್ಲಾಂಟೇಶನ್ ಫಾರ್ಮರ್ಸ್ ಪ್ರೊಡ್ಯೂಸರ್ ಕಂಪನಿ ಲಿಮಿಟೆಡ್ ವತಿಯಿಂದ ವಾರ್ಷಿಕ ಸಾಮಾನ್ಯ ಸಭೆ ಹಾಗು ಪುನರುತ್ಪಾದಕ ಕೃಷಿ ತರಬೇತಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮ ವ್ಯವಸ್ಥಾಪಕ ಬಿ.ಗಿರೀಶ್ ಅವರು ಮಾತನಾಡಿ, ಕಾಫಿ ಮತ್ತು ಕಾಳುಮೆಣಸಿಗೆ ಉತ್ತಮ ಮಾರುಕಟ್ಟೆ ಕಲ್ಪಿಸುವುದು ಎಫ್‌ಪಿಸಿಎಲ್ ಪ್ರಮುಖ ಉದ್ದೇಶವಾಗಿದೆ. ರೈತರು ತಮ್ಮ ಉತ್ಪನ್ನಗಳನ್ನು ಕಂಪನಿಗೆ ಪೂರೈಸುವ ಮೂಲಕ ಸಂಸ್ಥೆಯ ಬೆಳವಣಿಗೆಗೆ ಸಹಕರಿಸಬೇಕೆಂದರು.

Nestlé Sustainable Programme, Coffee Board, Vishal Commodities Vritti ಸಂಸ್ಥೆಗಳ ಪ್ರತಿನಿಧಿಗಳು ಮಾತನಾಡಿ, ಪುನರುತ್ಪಾದಕ ಕೃಷಿ, ಮಣ್ಣಿನ ಆರೋಗ್ಯ, ಜೀವ ವೈವಿಧ್ಯ, ನೀರಿನ ಸಂರಕ್ಷಣೆ ಕುರಿತು ರೈತರಿಗೆ ಮಾಹಿತಿ ನೀಡಿದರು.

ರೈತರ ಉತ್ಪನ್ನಗಳಿಗೆ ಮಾರುಕಟ್ಟೆ ಕಲ್ಪಿಸುವ ನಿಟ್ಟಿನಲ್ಲಿ ಚಂಗಡಿಹಳ್ಳಿಯಲ್ಲಿ ಕಾರ್ಯಕ್ರಮ ಹಮ್ಮಿಕೊಂಡಿರುವುದು ಶ್ಲಾಘನೀಯವೆಂದರು.

# ದಶಕದ ಬಳಿಕ ಜಿಲ್ಲಾ ಜೆಡಿಎಸ್‌ಗೆ ಮೇಜರ್ ಸರ್ಜರಿ

## ಬೆಂಗಳೂರಿನಲ್ಲಿ ದೇವೇಗೌಡರ ಸಮ್ಮುಖದಲ್ಲಿ ಸಭೆ । ಶೀಘ್ರ ಪದಗ್ರಹಣ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲಾ ಜೆಡಿಎಸ್‌ಗೆ ದಶಕದ ಬಳಿಕ ಮೇಜರ್ ಸರ್ಜರಿ ನಡೆದಿದ್ದು ಮಾಜಿ ಶಾಸಕ ಕೆ.ಎಸ್.ಲಿಂಗೇಶ್ ಅವರು ವಹಿಸಿಕೊಂಡಿದ್ದ ಜಿಲ್ಲಾಧ್ಯಕ್ಷ ಸ್ಥಾನವನ್ನು ಲಿಂಗಾಯತ ಸಮಾಜದ ನಟರಾಜ್‌ಗೆ ವಹಿಸಲಾಗಿದೆ.

ಬೆಂಗಳೂರಿನ ದೇವೇಗೌಡರ ನಿವಾಸದಲ್ಲಿ ಗುರುವಾರ ನಡೆದ ಜಿಲ್ಲೆಯ ಶಾಸಕರು, ಮಾಜಿ ಶಾಸಕರು, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರು, ತಾಲೂಕು ಘಟಕಗಳ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಪಕ್ಷದ ಹಿರಿಯ ಮುಖಂಡರ ಸಭೆಯಲ್ಲಿ ಜೆಡಿಎಸ್ ಜಿಲ್ಲಾ ಘಟಕವನ್ನು ಪುನಾರಚನೆ ಮಾಡುವ ಒಮ್ಮತದ ತೀರ್ಮಾನ ಕೈಗೊಳ್ಳಲಾಗಿದೆ.

ವಿವಿಧ ಘಟನೆಗಳ ನೇಮಕಾತಿ ಪತ್ರಕ್ಕೆ ದೇವೇಗೌಡರು ಸಹಿ ಹಾಕಿದ್ದು, ಶೀಘ್ರವೇ ಘೋಷಣೆ ಆಗಲಿದೆ ಎಂದು ಮೂಲಗಳಿಂದ ತಿಳಿದುಬಂದಿದೆ.



ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆ, ಪಕ್ಷ ಸಂಘಟನೆ ಹಾಗೂ ಜಿಲ್ಲಾ ಮತ್ತು ತಾಲೂಕು ಘಟಕಗಳನ್ನು ಪುನಾರಚನೆ ಮಾಡಲಾಗಿದೆ. ಸಭೆಯಲ್ಲಿ ಜಿಲ್ಲಾಧ್ಯಕ್ಷ ಸ್ಥಾನಕ್ಕೆ ನಟರಾಜ್ ಐಸಾಮಿಗೌಡ, ಬಿ.ಎ. ಜಗನ್ನಾಥ್ ಹಾಗೂ ಅರಸೀಕೆರೆಯ ಬಾಣಾವರ ಅಶೋಕ್ ಅವರ ಹೆಸರು ಪ್ರಮುಖವಾಗಿ ಕೇಳಿಬಂದವು. ಅಂತಿಮವಾಗಿ ಮೂವರಿಗೂ ಪಕ್ಷದಲ್ಲಿ ಪ್ರಮುಖ ಜವಾಬ್ದಾರಿ ನೀಡುವ ಮೂಲಕ ಯಾವುದೇ ಅಸಮಾಧಾನಕ್ಕೆ ಅವಕಾಶವಾಗದಂತೆ ತೀರ್ಮಾನ ಕೈಗೊಳ್ಳಲಾಗಿದೆ.

ಅದರಂತೆ ನಟರಾಜ್ ಐಸಾಮಿಗೌಡ ಜಿಲ್ಲಾಧ್ಯಕ್ಷರಾಗಿದ್ದರೆ, ಲಿಂಗಾಯತ-ವೀರಶೈವ ಸಮಾಜದ ಮುಖಂಡ ಹಾಗೂ ಕಾಫಿ ಬೆಳೆಗಾರ ಬಾಳುಪೇಟೆಯ ಬಿ.ಎ.ಜಗನ್ನಾಥ್ ಅವರನ್ನು ಜಿಲ್ಲಾ ಗೌರವಾಧ್ಯಕ್ಷರನ್ನಾಗಿ ಹಾಗೂ ಬಾಣಾವರ ಅಶೋಕ್ ಅವರನ್ನು ಜಿಲ್ಲಾ ಕಾರ್ಯಾಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ.

ಪ್ರಧಾನ ಕಾರ್ಯದರ್ಶಿಯಾಗಿ ಹನುಮಂತಪುರದ ರಾಮಚಂದ್ರ, ಸಹ ಕಾರ್ಯದರ್ಶಿಯಾಗಿ ವಕೀಲ ಹಾಗೂ ಮಹಾನಗರ ಪಾಲಿಕೆ ಮಾಜಿ ಸದಸ್ಯ ಕ್ರಾಂತಿ ಪ್ರಸಾದ್ ತ್ಯಾಗಿ ಅವರನ್ನು ನೇಮಕ ಮಾಡಲಾಗಿದೆ ಎಂದು ತಿಳಿದು ಬಂದಿದೆ.

ಈ ಮೂಲಕ ಬಹುತೇಕ ಎಲ್ಲ ಸಮುದಾಯಗಳಿಗೆ ಮನ್ನಣೆ ನೀಡಲಾಗಿದೆ.

ನೂತನ ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾಗಿರುವ ನಟರಾಜ್ ಐಸಾಮಿಗೌಡ ಅವರು ಹಿರಿಯ ಲೆಕ್ಕಪರಿಶೋಧಕ ಹಾಗೂ ವೀರಶೈವ ಸಮಾಜದ ಮುಖಂಡ ಐಸಾಮಿಗೌಡ ಅವರ ಪುತ್ರ. ಐಸಾಮಿಗೌಡ ಕುಟುಂಬವು ದೇವೇಗೌಡ ಕುಟುಂಬದೊಂದಿಗೆ ಹಲವು ವರ್ಷಗಳಿಂದ ನಿಕಟ ಬಾಂಧವ್ಯ ಹೊಂದಿದೆ.

ಐಸಾಮಿಗೌಡ ಅವರ ಪತ್ನಿ ಜಿಲ್ಲಾ ಪಂಚಾಯಿತಿ ಸದಸ್ಯರಾಗಿಯೂ ಕಾರ್ಯನಿರ್ವಹಿಸಿದ್ದರು.

ಬೇಲೂರು ತಾಲೂಕಿನ ಅರೇಹಳ್ಳಿ ಭಾಗದಲ್ಲಿ ಪಕ್ಷದ ಸಂಘಟನೆಯೊಂದಿಗೆ ಗುರುತಿಸಿಕೊಂಡಿರುವ ನಟರಾಜ್ ಅವರನ್ನು ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆ ಹಿನ್ನೆಲೆಯಲ್ಲಿ ಜಿಲ್ಲಾಧ್ಯಕ್ಷ ಸ್ಥಾನಕ್ಕೆ ಆಯ್ಕೆ ಮಾಡಲಾಗಿದೆ.

ಅಂತೆಯೇ ದೇವೇಗೌಡರ ಕುಟುಂಬದೊಂದಿಗೆ ಆಪ್ತ ಸಂಬಂಧ ಹೊಂದಿರುವ ಬಿ.ಎ. ಜಗನ್ನಾಥ್ ಅವರಿಗೆ ಜಿಲ್ಲಾ ಗೌರವಾಧ್ಯಕ್ಷ ಸ್ಥಾನ ನೀಡಲಾಗಿದೆ. ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಬಾಣಾವರ ಅಶೋಕ್ ಅವರನ್ನು ಜಿಲ್ಲಾ ಕಾರ್ಯಾಧ್ಯಕ್ಷರನ್ನಾಗಿ ಆಯ್ಕೆ ಮಾಡಿ, ಅರಸೀಕೆರೆಯಲ್ಲಿ ಪಕ್ಷ ಸಂಘಟನೆ ಜವಾಬ್ದಾರಿ ವಹಿಸಲಾಗಿದೆ.

## ಹೆಬ್ಬಾಳು ಹಾಲು ಉತ್ಪಾದಕರ ಸಹಕಾರ ಸಂಘದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ

# ದೇಶದ ಗಡಿಕಾಯುವ ಸೈನಿಕನಿಗೆ ಹಾಸನ ಜಿಲ್ಲೆಯ ಕ್ಷೀರಾಮೃತ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು : ಹಾಸನ ಹಾಲು ಒಕ್ಕೂಟದಿಂದ ಪ್ರತಿನಿತ್ಯ ಸರಾಸರಿ 16 ಲಕ್ಷ ಲೀಟರ್ ಹಾಲು ಉತ್ಪಾದಕರಿಂದ ಬರುತ್ತಿದೆ. ಇದರಲ್ಲಿ 4 ಲಕ್ಷ ಲೀಟರ್ ಹಾಲು ದೇಶವನ್ನು ಕಾಯುವ ಸೈನಿಕರಿಗೆ ಕಳಿಸುವುದು ನಿಜಕ್ಕೂ ಹೆಮ್ಮೆಯ ವಿಷಯವಾಗಿದೆ ಎಂದು ಹಾಸನ ಸಹಕಾರಿ ಹಾಲು ಒಕ್ಕೂಟದ ಸಹಾಯಕ ವ್ಯವಸ್ಥಾಪಕ ಎಸ್.ಬಿ.ದಿನೇಶ್ ಹೇಳಿದರು.

ತಾಲ್ಲೂಕಿನ ಹೆಬ್ಬಾಳು ಹಾಲು ಉತ್ಪಾದಕರ ಸಹಕಾರ ಸಂಘದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಜಿಲ್ಲೆಯಲ್ಲಿ ಹೈನುಗಾರಿಕೆ ಅತ್ಯಂತ ಪ್ರಬಲವಾಗಿ ಬೆಳೆಯಲು ಮಾಜಿ ಸಚಿವರಾದ ಹೆಚ್.ಡಿ.ರೇವಣ್ಣನವರ ಕಾರ್ಯಕ್ಷಮತೆ ನಿಜಕ್ಕೂ ಶ್ಲಾಘನೀಯ, ಸದ್ಯ ರಾಜ್ಯದಲ್ಲಿ ಬರ ಪರಿಸ್ಥಿತಿಯಿಂದ ರೈತರು ತತ್ತರಿಸಿದ್ದು ಅವರಿಗೆ ಬೆಂಬಲ ನೀಡುವ ಮೂಲಕ ಆರ್ಥಿಕ ಸಬಲೀಕರಣಕ್ಕೆ ಮುನ್ನುಡಿ ಬರಯಬೇಕು ಎಂದು ಹಾಸನ ಹಾಲು ಒಕ್ಕೂಟದ ಅಧ್ಯಕ್ಷರಾದ ಹೆಚ್.ಡಿ.ರೇವಣ್ಣನವರು ಹೈನುಗಾರಿಕೆ ಸಾಲವನ್ನು ರೈತರಿಗೆ ನೀಡಲು ಮುಂದಾಗಿದ್ದಾರೆ ಎಂದ ಅವರು ಹಾಸನ ಒಕ್ಕೂಟ, ಚಿಕ್ಕಮಗಳೂರು-ಕೊಡಗು ಮತ್ತು ಹಾಸನ ಜಿಲ್ಲೆಯನ್ನು ಹೊಂದಿದೆ. ಬೇಲೂರು ತಾಲ್ಲೂಕು ಕೂಡ ಹೈನುಗಾರಿಕೆಯ ಹಾಲಿನ ಉತ್ಪಾದನೆಯಲ್ಲಿ ಉತ್ತಮ ಹೆಸರು ಪಡೆದಿದೆ. ಇಲ್ಲಿನ 137 ಸಹಕಾರ ಸಂಘಗಳಲ್ಲಿ 37 ಸಂಘ ಬಿಎಂಸಿ ಹೊಂದಿದೆ. ರೈತರಿಗೆ ಇನ್ನುಷ್ಟು ಹಾಲಿನ ದರವನ್ನು ಹೆಚ್ಚಿಸಬೇಕು ಎಂದು 78 ಎಕ್ಕರೆಯಲ್ಲಿ ಸಾವಿರ ಕೋಟಿ ವೆಚ್ಚದಲ್ಲಿ ಮೋಘ ಡೈರಿ ಆರಂಭವಾಗುತ್ತಿದ್ದು ಇನ್ನು ಎರಡು ತಿಂಗಳಲ್ಲಿ ಲೋಕಾರ್ಪಣೆಯಾಗಲಿದೆ ಎಂದರು.



ಹೆಬ್ಬಾಳು ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ವೇದಮೂರ್ತಿ ಮಾತನಾಡಿ, ಬರಪರಿಸ್ಥಿತಿಯಲ್ಲಿ ರೈತರಿಗೆ ಹೈನುಗಾರಿಕೆ ಕೈಹಿಡಿದಿದೆ. ನಾವುಗಳು ನೀಡುವ ಹಾಲು ಸೈನಿಕರಿಗೆ, ಶಾಲಾ ಮಕ್ಕಳಿಗೆ ಮತ್ತು ಗ್ರಾಹಕರಿಗೆ ನೀಡುವ ಕಾರಣದಿಂದ ಪ್ರತಿ ರೈತರು ಗುಣಮಟ್ಟದ ಹಾಲನ್ನು ನೀಡಬೇಕು ಎಂದು ಮನವಿ ಮಾಡಿದ ಅವರು ಸರ್ವ ಸದಸ್ಯರ ವಾರ್ಷಿಕ ಸಭೆಯನ್ನು ಸದಸ್ಯರ ಅಭಿಪ್ರಾಯದಂತೆ ಸಂಘದ ಚಟುವಟಿಕೆಗಳನ್ನು ನಡೆಸಲಾಗುತ್ತದೆ. ಈಗಾಗಲೇ ಸೂಕ್ತ ಕಟ್ಟಡ ಮತ್ತು ಸಭಾಂಗಣ ಇರುವ ನಿಟ್ಟನಲ್ಲಿ ಮುಂದಿನ ದಿನದಲ್ಲಿ ಸಭಾಂಗಣಕ್ಕೆ ಹೈಟಕ್ ಸ್ವರೂಪ ನೀಡಲು ಬದ್ಧ, ಹಾಸನ ಒಕ್ಕೂಟದಿಂದ ಪಶು ವೈದ್ಯರನ್ನು ಕರೆಸುವ ಕೆಲಸ ಮಾಡಲಾಗುತ್ತದೆ ಎಂದು ತಿಳಿಸಿದರು.

ಹೆಬ್ಬಾಳು ಹಾಲು ಉತ್ಪಾದಕರ ಸಹಕಾರ ಸಂಘದ ಮಾಜಿ ನಿರ್ದೇಶಕ ಹೆಬ್ಬಾಳು ಹಾಲಪ್ಪ ಮಾತನಾಡಿ, ಸಹಕಾರ ಸಂಘದಲ್ಲಿ ಷೇರುದಾರರು ಪ್ರಮುಖ ಪಾತ್ರ ವಹಿಸುವ ಹಿನ್ನಲೆಯಲ್ಲಿ ಹಾಲು ಹಾಕದೆ ಷೇರು ಹೊಂದಿರುವವರಿಗೆ ಒಂದು ನಿರ್ದೇಶಕ ಸ್ಥಾನವನ್ನು ಮೀಡಲಿಡಬೇಕು ಮತ್ತು ಹೆಬ್ಬಾಳಿನಲ್ಲಿ ಪಶು ಚಿಕಿತ್ಸಾಲಯ ಕಟ್ಟಡ ನಿರ್ಮಾಣಕ್ಕೆ ಸದ್ಯ ಶಾಸಕರಾದ ಹೆಚ್.ಕೆ.ಸುರೇಶ್ ಅವರು ಅನುದಾನ ನೀಡುವ ಭರವಸೆ ನೀಡಿದ್ದಾರೆ ಎಂದರು. ಇದೇ ಸಂದರ್ಭದಲ್ಲಿ ಹಾಲಿನ ಡೈರಿಗೆ ಅತಿ ಹೆಚ್ಚು ಹಾಲನ್ನು ಹಾಕಿದ ಪರಮೇಶ್, ಚಂದ್ರಶೇಖರಯ್ಯ ಮತ್ತು ಜಗದೀಶ್ ಅವರನ್ನು ಸನ್ಮಾನಿಸಲಾಯಿತು ಮತ್ತು 2025ರ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಅಭಿನಂದನೆ ಸಲ್ಲಿಸಲಾಯಿತು.

# ವಿದ್ಯುತ್ ತಂತಿ ತಗುಲಿ ರೈತ ಸಾವು



ಸಕಲೇಶಪುರ: ತಾಲೂಕಿನ ಬೆಳಗೋಡು ಹೋಬಳಿಯ ಕೆಲವಳ್ಳಿ ಗ್ರಾಮದಲ್ಲಿ ಕೃಷಿ ಕೆಲಸದ ವೇಳೆ ಅಲ್ಯೂಮಿನಿಯಂ ಏಣಿ 11 ಕೆ.ವಿ. ವಿದ್ಯುತ್ ಮಾರ್ಗಕ್ಕೆ ತಾಗಿ ವಿದ್ಯುತ್ ಪ್ರವಹಿಸಿದ ಪರಿಣಾಮ ಯುವ ರೈತ ಸ್ಥಳದಲ್ಲೇ ಮೃತಪಟ್ಟಿರುವ ದಾರುಣ ಘಟನೆ ಗುರುವಾರ ಬೆಳಗ್ಗೆ ನಡೆದಿದೆ. ಕೆಲವಳ್ಳಿ ಗ್ರಾಮದ ಅಭಿಷೇಕ್ (36) ಮೃತರು. ಕೈಯಲ್ಲಿದ್ದ ಅಲ್ಯೂಮಿನಿಯಂ ಏಣಿ ಆಕಸ್ಮಿಕವಾಗಿ ಸಮೀಪದಲ್ಲಿದ್ದ 11 ಕೆ.ವಿ. ವಿದ್ಯುತ್ ತಂತಿಗೆ ತಗುಲಿದೆ. ಇದರಿಂದ ಏಣಿಯ ಮೂಲಕ ವಿದ್ಯುತ್ ಪ್ರವಹಿಸಿ ಅಭಿಷೇಕ್ ಅವರಿಗೆ ತೀವ್ರ ವಿದ್ಯುತ್ ಆಘಾತವಾಗಿದ್ದು, ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಅಭಿಷೇಕ್ ಅವರ ತಂದೆ ನಿವೃತ್ತ ಸೈನಿಕರಾಗಿದ್ದು, ಅವರ ನಿಧನದ ಬಳಿಕ ಕುಟುಂಬದ ಕೃಷಿ ಜವಾಬ್ದಾರಿಯನ್ನು ಅಭಿಷೇಕ್ ವಹಿಸಿಕೊಂಡು ಕೃಷಿ ಚಟುವಟಿಕೆಗಳನ್ನು ಉತ್ತಮವಾಗಿ ನಿರ್ವಹಿಸುತ್ತಿದ್ದರು ಎನ್ನಲಾಗಿದೆ. ಮೃತರು ತಾಯಿ, ಪತ್ನಿ ಹಾಗೂ ಓರ್ವ ಪುತ್ರಿಯನ್ನು ಅಗಲಿದ್ದಾರೆ. ಅಪಾರ ಬಂಧು-ಬಳಗ ಹಾಗೂ ಸ್ನೇಹಿತರನ್ನು ಅಗಲಿರುವ ಅವರ ಕುಟುಂಬದ ಆಕ್ರಂದನ ಮುಗಿಲು ಮುಟ್ಟಿದೆ. ಮೃತರ ಅಂತ್ಯಕ್ರಿಯೆಯನ್ನು ಗ್ರಾಮದದಲ್ಲಿ ನೆರವೇರಿಸಲಾಯಿತು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248